**ಪ್ರಕಟಣೆ**

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು**

**ಮಾಹಿತಿ ಹಕ್ಕು ಅಧಿನಿಯಮ ಸೆಕ್ಷನ್ 4(1) (ಎ) ರಡಿ ಸಾರ್ವಜನಿಕರಿಗೆ ಮಾಹಿತಿ:**

ಮಾಹಿತಿ ಹಕ್ಕು ಅಧಿನಿಯಮ 2005 ರ ಅಡಿಯಲ್ಲಿ ಸಾರ್ವಜನಿಕರು ಕೋರಿದಂತಹ ಮಾಹಿತಿಯನ್ನು ಅಧಿನಿಯಮದ ಪರಿಮಿತಿಯೊಳಗೆ ಪೂರೈಸುವುದು ಕಡ್ಡಾಯವಾಗಿರುತ್ತದೆ ಸದರಿ ಅಧಿನಿಯಮದ ಸೆಕ್ಷನ್ 4(1) (ಎ) ಅಡಿಯಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ ಒದಗಿಸಬೇಕಾದಂತಹ ಸ್ವರೂಪ, ಇಲಾಖೆಯಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳು, ಇತ್ಯಾದಿ ಮಾಹಿತಿಯನ್ನು ಸಾರ್ವಜನಿಕ ಮಾಹಿತಿಗಾಗಿ ಪ್ರಕಟಿಸುವ ಅಗತ್ಯವಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳ ವಸತಿ ಶಾಲೆ/ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ ಇಂದಿರಾಗಾಂಧಿ/ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳು ಒಟ್ಟು 824 ವಸತಿ ಶಾಲಾ/ಕಾಲೇಜು ಕಾರ್ಯನಿರ್ವಹಿಸುತ್ತಿವೆ.

ರಾಜ್ಯ ಮಟ್ಟದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಸಂಘದ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು ಸಂಘದ ಮುಖ್ಯಸ್ಥರಾಗಿದ್ದು, ಸಂಘದ ಅಧಿಕಾರಿಗಳು/ ಸಿಬ್ಬಂದಿಗಳು ಸಂಘದ ಆಡಳಿತ ಮಂಡಳಿ ತೀರ್ಮಾನದಂತೆ ಹಾಗೂ ಸರ್ಕಾರಿ ನಿಯಮದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಪ್ರತಿಭಾವಂತ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ **'ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ'**ವನ್ನು 1999-2000ನೇ ಸಾಲಿನಲ್ಲಿ ಸ್ಥಾಪನೆ ಮಾಡಲಾಗಿದೆ. ಸಂಘದ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ/ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಒಟ್ಟು 824 ವಸತಿ ಶಾಲೆಗಳು/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಪ್ರವರ್ಗವಾರು ವಿವರವನ್ನು ಸಂಘದ ವೆಬ್‌ಸೈಟ್ www.kreis.kar.nic.in ರಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ.